[redacted]



# ಆಂಜನೇಯ ಅವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸ್ಥಾನ ನೀಡಲು ಮನವಿ-ಮಾನಯ್ಯ



ಬಳ್ಳಾರಿ ಮಾ -: ಮಾಜಿ ಸಚಿವರು ಪರಿಶಿಷ್ಟ ಜಾತಿ ಮುಖಂಡರೂ ಆಗಿರುವ ಹೆಚ್. ಆಂಜನೇಯ ಅವರಿಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಾರ್ಯಾಧ್ಯಕ್ಷರಾಗಿ ನೇಮಕ ಮಾಡಬೇಕು ಎಂದು ನಿರಾಶ್ರಿತರ ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷರಾದ ಎ. ಮಾನಯ್ಯ, ಛಲವಾದಿ ಮಹಾ ಸಭಾ ಜಿಲ್ಲಾಧ್ಯಕ್ಷರು ಹಾಗು ಕಾಂಗ್ರೆಸ್ ಮುಖಂಡ ಛಲವಾದಿ ನರಸಪ್ಪ ಮತ್ತು ರೂಪನಗುಡಿ ಕಾಂಗ್ರೆಸ್ ಮುಖಂಡ ರಾಮಾಂಜಿನ, ಎರ್ರಿಸ್ವಾಮಿ ಹಲಕುಂದಿ ಅವರು ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿರುವ ಅಸ್ಪೃಶ್ಯರೆಲ್ಲರೂ ಹೆಚ್ಚಿನ ಮಟ್ಟದಲ್ಲಿ ಅವರ ಬೆಂಬಲಿಗರು ಇದ್ದು, ಅವರ ಪರವಾಗಿದ್ದಾರೆ. ಅಲ್ಲದೆ, ಉತ್ತರ ಕರ್ನಾಟಕದಲ್ಲಿರುವ ಪರಿಶಿಷ್ಟ ಜಾತಿ ಜನಾಂಗದ ಸಮುದಾಯವು ಹೆಚ್. ಆಂಜನೇಯ ಅವರ ಪರವಾಗಿದ್ದು, ಅವರ ಬೆಂಬಲವಾಗಿದ್ದಾರೆ. ಅಲ್ಲದೆ, ಆಂಜನೇಯ ಅವರನ್ನು ಕೆಪಿಸಿಸಿ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡುವುದರಿಂದ ಪ್ರಸ್ತುತ ನಡೆಯುವ ಲೋಕಸಭಾ ಚುನಾವಣೆಯಲ್ಲೂ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಕಳೆದ ಕಾಂಗ್ರೆಸ್ ಸರ್ಕಾರದಲ್ಲಿ ಸಮಾಜ ಕಲ್ಯಾಣ ಸಚಿವರಾಗಿ ಸಮಾಜಕ್ಕೆ ಉತ್ತಮ ಸೇವೆಯನ್ನು ಸಲ್ಲಿಸಿದ್ದಾರೆ. ಅಲ್ಲದೆ, ಅಲ್ಲದೆ, ಆಂಜನೇಯ ಅವರನ್ನು ಪಕ್ಷದ ರಾಜ್ಯ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡುವುದರಿಂದ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಆಂಜನೇ ಯ ಅವರ ನೇತೃತ್ವದಲ್ಲಿ ಮತಯಾಚಿಸಲು ಅನುಕೂಲವಾಗುತ್ತದೆ. ಈ ನಿಟ್ಟಿನಲ್ಲಿ ಆಂಜನೇಯ ಅವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

# ಭಗತ್ ಸಿಂಗ್, ಸುಖ್ ದೇವ್, ರಾಜ್ ಗುರು ಅವರ ಪುಣ್ಯ ದಿನಾಚರಣೆ




ಬಳ್ಳಾರಿ,ಮಾ.-: ಬಳ್ಳಾರಿ ನಗರದ ವಿಮ್ಸ್ ಮೈದಾನ, ಮುನಿಸಿಪಲ್ ಮೈದಾನ ಸೇರಿದಂತೆ ಜಿಲ್ಲೆಯಾದ್ಯಂತ ವಿವಿಧ ಶಾಲಾ -ಕಾಲೇಜುಗಳಲ್ಲಿ ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳಿಂದ ಸ್ವಾತಂತ್ರ್ಯ ಸಂಗ್ರಾಮದ ಮಹಾನ್ ಕ್ರಾಂತಿಕಾರಿಗಳಾದ ಧೀರ ಹುತಾತ್ಮ ಭಗತ್ ಸಿಂಗ್, ಸುಖ್ ದೇವ್, ರಾಜ್ ಗುರು ಅವರ ಪುಣ್ಯ ದಿನಾಚರಣೆಯನ್ನು ಆಚರಿಸಲಾಯಿತು. ಬ್ರಿಟಿಷರ ದಬ್ಬಾಳಿಕೆ ವಿರುದ್ಧ ದೇಶದ ಸ್ವಾತಂತ್ರ್ಯಕ್ಕಾಗಿ ರಾಜಿರಹಿತವಾಗಿ ಹೋರಾಡಿ ನಗುನಗುತ್ತಾ ಗಲ್ಲಿಗೇರಿದ ಮಹಾನ್ ಕ್ರಾಂತಿಕಾರಿಗಳಾದ ಭಗತ್ ಸಿಂಗ್ , ಸುಖ್ ದೇವ್ ಹಾಗೂ ರಾಜ್ ಗುರು ಅವರನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಎಐಡಿಎಸ್‌ಓ ರಾಜ್ಯ ಸೆಕ್ರೆಟರಿಯೇಟ್ ಸದಸ್ಯರು ರವಿಕಿರಣ್.ಜೆ.ಪಿ ಅವರು ಮಾತನಾಡಿ .ಭಗತ್ ಸಿಂಗ್ ಅವರು ಹೀಗೆ ಹೇಳಿದ್ದರು "ಯಾವ ಕ್ರಾಂತಿ ಜನತೆಗೆ ಸ್ವಾತಂತ್ರ್ಯವನ್ನು ತಂದು ಕೊಟ್ಟು ಮಾನವನಿಂದ ಮಾನವನ ಶೋಷಣೆಯನ್ನು ಅಸಾಧ್ಯಗೊಳಿಸುತ್ತದೆಯೋ, ಅಂತಹ ಕ್ರಾಂತಿಯ ಸಂದೇಶವನ್ನು ವಿದ್ಯಾರ್ಥಿಗಳು ಹಾಗೂ ಯುವ ಜನರು ದೇಶದ ಮೂಲೆ ಮೂಲೆಗೂ ಒಯ್ಯಬೇಕು. ಕೋಟ್ಯಾಂತರ ಮರ್ದಿತ ಜನರಿಗೆ ತಲುಪಿಸಬೇಕು. ಬಂಡವಾಳಶಾಹಿ ಮತ್ತು ಸಾಮ್ರಾಜ್ಯವಾದ ಶೋಷಣೆಗೆ ಮುಕ್ತಾಯ ಹಾಡಲು ಸಮಾಜವಾದಿ ಕ್ರಾಂತಿ ಅನಿವಾರ್ಯ"ಎಂದು.

ಭಗತ್ ಸಿಂಗ್ ಅವರ ವಿಚಾರಗಳು ಇಂದಿಗೂ ಪ್ರಸ್ತುತವಾಗಿದೆ. ಹಸಿವು, ಬಡತನ, ನಿರುದ್ಯೋಗವಿಲ್ಲದಂತಹ ಸಮಾಜವಾದಿ ಭಾರತವನ್ನು ನಿರ್ಮಿಸುವುದೇ ಅವರ ಕನಸಾಗಿತ್ತು. ಅವರ ಕನಸನ್ನು ನನಸಾಗಿಸುವ ದಾರಿಯಲ್ಲಿ ಅವರ ಉತ್ತರಾಧಿಕಾರಿಗಳಾಗಿ ವಿದ್ಯಾರ್ಥಿಗಳು, ಯುವಜನರ ಮುನ್ನಡೆಯುವುದು ತುರ್ತು ಅವಶ್ಯಕವಾಗಿದೆ ಎಂದರು. ಎಐಡಿಎಸ್‌ಓ ಜಿಲ್ಲಾ ಅಧ್ಯಕ್ಷರು ಕೆ.ಈರಣ್ಣ ಹಾಗೂ ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷರು ಎಂ.ಶಾಂತಿ, ಪ್ರಮೋದ್, ಖಜಾಂಚಿ ಅನುಪಮ ಮತ್ತು ಸದಸ್ಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಕರು ಭಾಗವಹಿಸಿದ್ದರು.

# ಅನಾಮಧೇಯ ಕರೆ ಬಂದಲ್ಲಿ ಎಚ್ಚರದಿಂದಿರಿ-ಮಹಾನಗರ ಪಾಲಿಕೆ ಆಯುಕ್ತ ಖಲೀಲ್‌ಸಾಬ್ ಮನವಿ



ಬಳ್ಳಾರಿ,ಮಾ-: ಮಹಾನಗರ ಪಾಲಿಕೆಯ ವ್ಯಾಪ್ತಿಯ ಸಾರ್ವಜನಿಕರು ಹಾಗೂ ಉದ್ದಿಮೆದಾರರಿಗೆ ಅನಾಮಧೇಯ ವ್ಯಕ್ತಿಗಳಿಂದ ಕರೆ ಬಂದಲ್ಲಿ ಎಚ್ಚರದಿಂದ ಉತ್ತರಿಸಬೇಕು ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತ ಜಿ.ಖಲೀಲ್ಸಾಬ್ ಅವರು ಮನವಿ ಮಾಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಅನಾಮಧೇಯ ವ್ಯಕ್ತಿಗಳು ಬಳ್ಳಾರಿ ಮಹಾನಗರ ಪಾಲಿಕೆ ಹಾಗೂ ಗ್ರಾಹಕರ ನ್ಯಾಯಾಲಯ ಹೆಸರಿನಲ್ಲಿ ಕರೆಮಾಡಿ ನಮ್ಮ ಟ್ಯಾಕ್ಸ್, ಉದ್ದಿಮೆ ಪರವಾನಗೆ ನವೀಕರಣ ಇತ್ಯಾದಿಗಳು ಬಾಕಿ ಇದ್ದು, ತುರ್ತಾಗಿ ಫೋಬ್ಪೇ ಮೂಲಕ ಹಣ ಪಾವತಿಸಬೇಕು. ಇಲ್ಲದಿದ್ದಲ್ಲಿ ಜಪ್ತಿ ಮಾಡಿ, ಪ್ರಕರಣ ದಾಖಲಿಸಲಾಗುವುದು ಎಂದು ಬೆದರಿಸಿ ಹಣವಸೂಲಿ ಮಾಡುತ್ತಿರುವ ಪ್ರಕರಣಗಳು ಪಾಲಿಕೆಯ ಗಮನಕ್ಕೆ ಬಂದಿವೆ.ಇದಕ್ಕೆ ಸಂಬಂಧಿಸಿದಂತೆ ಈಗಾಗಲೇ ಕೆಲವು ಸಾರ್ವಜನಕರಿಂದ ಸೈಬರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಸಾರ್ವಜನಿಕರು ಈ ರೀತಿ ಕರೆ ಬಂದಲ್ಲಿ ವಂಚನೆಗೆ ಒಳಗಾಗದೇ ಪಾಲಿಕೆಗೆ ಸಂಪರ್ಕಿಸಿ ಖಚಿತಪಡಿಸಿಕೊಳ್ಳಬೇಕು. ಫೋಬ್ಪೇ ಅಥವಾ ಇತರೆ ಡಿಜಿಟಲ್ ಪೇಮೆಂಟ್ ಮೂಲಕ ಪಾವತಿಸಿ ಮೋಸ ಹೋಗಬಾರದು ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಕರು ತಮಗೆ ಬಾಕಿ ಇರುವ ಯಾವುದೇ ಬಿಲ್ಲಿಅನ್ನು ಆಬ್ಬಲೈನ್ ಮೂಲಕ ಪಾವತಿಸಲು ಇಚ್ಛಿಸಿದಲ್ಲಿ ಭಾರತ್ ಬಿಲ್ ಪೇಮೆಂಟ್ ಸಿಸ್ಟಮ್ (ಬಿಬಿಪಿಎಸ್) ಮೂಲಕ ಪಾವತಿಸುವವರು ಪೌರಾಡಳಿತ ನಿರ್ದೇಶನಾಲಯ ಕರ್ನಾಟಕ ಬಿಲ್ಲರ್ ಐಡಿ (Directorate of Municipal Administration Karnataka Biller ID) ಮೂಲಕ ಮಾತ್ರ ಪಾವತಿಸಬೇಕುಮ ಅಥವಾ ನಗದು ರೂಪದಲ್ಲಿ ಪಾವತಿಸುವವರು ಪಾಲಿಕೆಯ ಕಚೇರಿಯ ಬ್ಯಾಂಕ್ ಆಫ್ ಬರೋಡಾ ನಗದು ಶಾಖೆಯಲ್ಲಿ ಸಂದಾಯ ಮಾಡಬೇಕು.

ಸಾರ್ವಜನಕರು ಈ ರೀತಿಯ ಕರೆ ಬಂದಲ್ಲಿ ಜಾಗರೂಕರಾಗಿರಬೇಕು. ಮೋಸ ಹೋಗದೇ ಸೈಬರ್ ಕ್ರೈಂ ಸಹಾಯವಾಣಿ ಸಂಖ್ಯೆ 1930ಕ್ಕೆ ಕರೆಮಾಡಿ ದೂರು ದಾಖಲಿಸಬಹುದು ಎಂದು ಪಾಲಿಕೆಯ ಆಯುಕ್ತ ಜಿ.ಖಲೀಲ್ಸಾಬ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೇರಂ ವಿವೇಕ್‌ಗೆ ಮೇಯರ್ ಸ್ಥಾನ ನೀಡಲು ವಿವಿದ ಮುಖಂಡರ ಅಗ್ರಹ



ಬಳ್ಳಾರಿ ಮಾ-: ಬಳ್ಳಾರಿ ನಗರದ 20 ನೇ ವಾರ್ಡಿನ ಪಾಲಿಕೆ ಸದಸ್ಯ ಪೇರಂ ವಿವೇಕ್ ಅವರನ್ನು ಬಳ್ಳಾರಿ ಮಹಾ ನಗರ ಪಾಲಿಕೆ ಮೇಯರ್ ಆಗಿ ನೇಮಕ ಮಾಡಬೇಕು ಎಂದು ದಲಿತ ಮುಖಂಡರು ಮತ್ತು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸಾಗರ ಬಣ) ಮುಖಂಡರು ಹಾಗು ವಾಲ್ಮೀಕಿ ಯುವ ವೇದಿಕೆ ಬಳ್ಳಾರಿ ಜಿಲ್ಲಾ ಮುಖಂಡರು ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಸಂಘಟನೆಗಳ ಮುಖಂಡರಾದ ಎಂ.ಎಸ್. ಭೀಮಾಶಂಕರ, ಭತ್ರಿ ಮಹೇಶ್, ಶ್ರೀರಾಂಪುರ ಕಾಲೋನ ಲೋಕೇಶ್, ಸಿದ್ದಾರ್ಥನಗರ ರಾಮಾಂಜಿನ, ಸಿದ್ದಾರ್ಥನಗರ ರಮೇಶ್, ಮಹಾನಂದಿ ಕೊಟ್ಟಂ ಆನಂದ, ಕಂಟೋನ್ ಮೆಂಟ್ ತುಕಾರಾಂ, ಶ್ರೀರಾಂಪುರ ಕಾಲೋನ ಪೃಥ್ವಿ, ವಾಲ್ಮೀಕಿ ಯುವ ವೇದಿಕೆ ಜಿಲ್ಲಾಧ್ಯಕ್ಷ ಬಿ.ನಾಗರಾಜ, ಗ್ರಾಮೀಣ ಘಟಕದ ಅಧ್ಯಕ್ಷ ಬಿ.ಸುನಿಲ್, ಬಿ. ರಘು ಅವರು, ಪೇರಂ ವಿವೇಕ್ ಅವರು ಕಳೆದ 20 ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಸಕ್ರೀಯ ಕಾರ್ಯಕರ್ತರಾಗಿ ಕಾರ್ಯಕರ್ತನಾಗಿ ಪಕ್ಷದ ಸಂಘಟನೆ ಮತ್ತು ಪಕ್ಷದ ಬಲವರ್ಧನೆಗೆ ಶಕ್ತಿ ಮೀರಿ ಶ್ರಮಿಸಿದ್ದಾರೆ. ಪಕ್ಷದ ಹೋರಾಟಗಳಲ್ಲಿ ತಮ್ಮನ್ನು ತಾವು ಸಕ್ರೀಯವಾಗಿ ತೊಡಗಿಸಿಕೊಂಡಿದ್ದಾರೆ ಪಕ್ಷಕ್ಕೆ ನಿಷ್ಠಾವಂತ ಕಾರ್ಯಕರ್ತರಾಗಿ ದುಡಿದಿದ್ದಾರೆ ಎಂದು ತಿಳಿಸಿದ್ದಾರೆ.

ಕಳೆದ 2011 ರಿಂದ 2014 ರವರೆಗೆ ಯೂತ್ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯ ದರ್ಶಿ ಯಾಗಿ, 2014 ರಿಂದ 2017 ರವರೆಗೆ ಯೂತ್ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷರಾಗಿ ಮತ್ತು 2018 ರಿಂದ 2023 ರವರೆಗೆ ಕಂಟೋನ್ಮೆಂಟ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಪಕ್ಷಕ್ಕೆ ದುಡಿದಿದ್ದಾರೆ. ಈ ನಿಟ್ಟಿನಲ್ಲಿ ಅವರಿಗೆ ಮೇಯರ್ ಸ್ಥಾನ ನೀಡಬೇಕು ಎಂದು ಮನವಿ ಮಾಡಿದ್ದಾರೆ.

# ವಿಮ್ಸ್- ಮಾ.28 ರಂದು 63ನೇ ಪದವಿ ಪ್ರದಾನ ಸಮಾರಂಭ




ಬಳ್ಳಾರಿ,ಮಾ.-:ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ 63ನೇ ಪದವಿ ಪ್ರದಾನ ಸಮಾರಂಭವು ಮಾ.28 ರಂದು ಬೆಳಿಗ್ಗೆ 10 ಗಂಟೆಗೆ ವಿಮ್ಸ್‌ನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸಮಾರಂಭದಲ್ಲಿ ಪ್ರಧಾನ ಪೋಷಕರಾದ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹ್ಸಿನ್ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಡಾ.ಎಂ.ಕೆ. ರಮೇಶ್ ಅವರು ಆಗಮಿಸುವರು.

ಸಮಾರಂಭದ ಜಿಲ್ಲಾಧಿಕಾರಿ ಹಾಗೂ ವಿಮ್ಸ್ ಆಡಳಿತ ಮಂಡಳಿಯ ಸದಸ್ಯರಾದ ಪ್ರಶಾಂತ್ ಕುಮಾರ್ ಮಿಶ್ರಾ, ಸಹ ಪೋಷಕರಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಡಾ.ಬಿ.ಎಲ್.ಸುಜಾತ ರಾಥೋಡ್, ಅವರು ಉಪಸ್ಥಿತರಿರುವರು. ತಮಿಳುನಾಡು ಸರ್ಕಾರದ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಡಾ. ಚಂದ್ರಮೋಹನ್.ಬಿ, ಯು.ಎಸ್.ಎ.ನ ವಾಸ್ಕುಲರ್ ಶಸ್ತ್ರ ಚಿಕಿತ್ಸಕರಾದ ಡಾ.ಪಿ.ವಿ.ಪತಂಜಲಿ ಶರ್ಮಾ ಹಾಗೂ ಕರ್ನಾಟಕ ವೈದ್ಯಕೀಯ ಮಂಡಳಿಯ ಸದಸ್ಯರಾದ ಡಾ.ವೈ.ಸಿ ಯೋಗಾನಂದ ರೆಡ್ಡಿ ಅವರು ಅವರು ಮುಖ್ಯ ಅತಿಥಿಯಾಗಿ ಭಾಗವಹಿಸುವರು. ವಿಮ್ಸ್‌ನ ಡೀನ್ ಹಾಗೂ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ ಅವರು ಅಧ್ಯಕ್ಷತೆ ವಹಿಸುವರು. ವಿಮ್ಸ್‌ನ ಪ್ರಾಚಾರ್ಯರಾದ ಡಾ.ಕೃಷ್ಣಸ್ವಾಮಿ.ಡಿ, ವಿಮ್ಸ್‌ನ ಮುಖ್ಯ ಆಡಳಿತಾಧಿಕಾರಿ ಶೀಲವಂತ ಶಿವಕುಮಾರ್ ಸೇರಿದಂತೆ ಉಪನ್ಯಾಸ ವೃಂದ, ಸಿಬ್ಬಂದಿ ವರ್ಗ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿರುವರು ಎಂದು ವಿಮ್ಸ್ ಪ್ರಕಟಣೆ ತಿಳಿಸಿದೆ.

# ಸಿ-ವಿಜಿಲ್-ಚುನಾವಣಾ ಅಕ್ರಮ ತಡೆಯಲು ಸಾರ್ವಜನಕರು ಸಿ-ವಿಜಿಲ್ ಆಪ್‌ನಲ್ಲಿ ದೂರು ಸಲ್ಲಿಸಿ; 100 ನಿಮಿಷದೊಳಗೆ ಸಿಗಲಿದೆ ಪರಿಹಾರ



ಬಳ್ಳಾರಿ,ಮಾ.26.ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆಗಳನ್ನು ನಡೆಸಲು ಸಾರ್ವಜನಕರ ಪಾತ್ರ ಅತ್ಯಮೂಲ್ಯವಾಗಿದೆ. ಅದೇರೀತಿಯಾಗಿ ಮುಕ್ತ, ಪಾರದರ್ಶಕ ಚುನಾವಣೆ ನಡೆಸಲು ಮತ್ತು ಚುನಾವಣಾ ಅಕ್ರಮ ತಡೆಯಲು ಭಾರತದ ಚುನಾವಣಾ ಆಯೋಗವು ಸಿ-ವಿಜಿಲ್ (ಅ-ಗಿರುಟ) ಮೊಬೈಲ್ ಅಪ್ಲಿಕೇಶನ್ ಅನ್ನು ಅಭಿವೃದ್ಧಿಪಡಿಸಿದೆ.ಇತ್ತೀಚಿನ ದಿನಗಳಲ್ಲಿ ಎಲ್ಲರ ಬಳಿಯು ಸ್ಮಾರ್ಟ್‌ಫೋನ್ ಇರುವುದು ಸಹಜ. ಅಂಗೈ ತುದಿಯಲ್ಲಿ ಎಲ್ಲ ವೀಕ್ಷಿಸಬಹುದು ಮತ್ತು ಸೆರೆಹಿಡಿಯಬಹುದು. ಸಿ-ವಿಜಿಲ್ ನೊಂದಿಗೆ, ನಮ್ಮ ಸ್ಮಾರ್ಟ್‌ಫೋನ್‌ನಿಂದ ನೇರವಾಗಿ ಮಾದರಿ ನೀತಿ ಸಂಹಿತೆಯ ಯಾವುದೇ ಉಲ್ಲಂಘನೆಗಳನ್ನು ನೀವು ವರದಿ ಮಾಡಬಹುದು. ಅದು ಮತದಾರರ ಯಾವುದೇ ಆಮಿಷಗಳ ಅಥವಾ ಅಕ್ರಮ ಪ್ರಚಾರ ಹಾಗೂ ಸರ್ಕಾರಿ ಸಂಪನ್ಮೂಲಗಳ ದುರುಪಯೋಗ ಅಥವಾ ಯಾವುದೇ ರೀತಿಯ ಉಲ್ಲಂಘನೆಯಾಗಿರಬಹುದು. ನಮ್ಮ ವರದಿಯು ನಮ್ಮ ಚುನಾವಣೆಗಳ ಸಮಗ್ರತೆಯನ್ನು ಎತ್ತಿಹಿಡಿಯಲು ಸಹಾಯ ಮಾಡುತ್ತದೆ.ಮತಕ್ಕಾಗಿ ಮತದಾರರನ್ನು ಸೆಳೆಯಲು ಹಣ, ಮದ್ಯ, ಉಡುಗೋರೆಗಳನ್ನು ಹಂಚುವವರನ್ನು ಪೊಲೀಸರಿಗೆ ತಿಳಿಸುವುದು ಹೇಗೆ? ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗುವುದನ್ನು ಹೇಗೆ ತಡೆಗಟ್ಟಬೇಕು ಎಂಬ ಹಲವು ಪ್ರಶ್ನೆಗಳು ಇದ್ದಲ್ಲಿ ಸಿ-ವಿಜಿಲ್ ಆಪ್ (ಸಿಟಿಜನ್-ವಿಜಿಲ್) ಮೂಲಕ ದೂರು ನೀಡಬಹುದು.

*ಸಿ-ವಿಜಿಲ್ ಆಪ್ ಡೌನ್ಲೋಡ್ ಮಾಡಿಕೊಳ್ಳುವುದು ಹೇಗೆ?*- ಮೊದಲು ಗೂಗಲ್ ಪ್ಲೇಸ್ಟೋರ್ ಅಥವಾ ಆಪಲ್ ಆಪ್ ಸ್ಟೋರ್‌ನಿಂದ ಸಿ-ವಿಜಿಲ್ ಅಪ್ಲಿಕೇಶನ್ ಅನ್ನು ಡೌನ್ಲೋಡ್ ಮಾಡಿ. ನೀವು ಸಾಕ್ಷಿಯಾಗಿರುವ ಯಾವುದೇ ಚುನಾವಣಾ ಸಂಬಂಧಿತ ಉಲ್ಲಂಘನೆಗಳ ಫೋಟೋಗಳು ಅಥವಾ ವೀಡಿಯೊಗಳನ್ನು ಸೆರೆಹಿಡಿಯಿರಿ. ನಮ್ಮ ವರದಿಯನ್ನು ಅಪ್ಲಿಕೇಶನ್ ಮೂಲಕ ಅಪ್ಲೋಡ್ ಮಾಡಿ, ಘಟನೆ ಮತ್ತು ಸ್ಥಳದ ವಿವರಗಳನ್ನು ಒದಗಿಸಿ. ನಮ್ಮ ವರದಿಯನ್ನು ಕ್ರಮಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ತ್ವರಿತವಾಗಿ ರವಾನಿಸಲಾಗುತ್ತದೆ.ಸಿ-ವಿಜಿಲ್ ಆಪ್ ಕಾರ್ಯ ಹೇಗೆ:-ಆಪ್ ಓಪನ್ ಮಾಡಿದಾಗ ನಮ್ಮ ಹೆಸರು ಹಾಗೂ ಮೊಬೈಲ್ ಸಂಖ್ಯೆಯ ಹಾಕಿ ರಿಜಿಸ್ಟರ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳು ಮತ್ತು ಅವರ ಬೆಂಬಲಿಗರು ಹಣ, ಮದ್ಯ, ಉಡುಗೊರೆಗಳನ್ನು ಹಂಚುವ ಸಂದರ್ಭದಲ್ಲಿ ಸಾರ್ವಜನಕರು ಫೋಟೋ ಮತ್ತು ವಿಡಿಯೋವನ್ನು (2 ನಿಮಿಷ) ಸೆರೆಹಿಡಿದು ಈ ಆಪ್ನಲ್ಲಿ ಅಪ್ಲೋಡ್ ಮಾಡಬಹುದು. ಅಲ್ಲಿನ ವಿಳಾಸವನ್ನು ನಮೂದಿಸಬೇಕು. ಜೊತೆಗೆ ಇದು ಸಂಪೂರ್ಣ ಉಚಿತವಾಗಿರಲಿದೆ.

ಏನೆಲ್ಲಾ ದೂರು ನೀಡಬಹುದು?:*-ವ್ಯಕ್ತಿಯೊಬ್ಬರು ನಿರ್ದಿಷ್ಟ ವ್ಯಕ್ತಿ ಅಥವಾ ಪಕ್ಷಕ್ಕೆ ಹಣ ವಿತರಣೆ ಮಾಡಿದರೆ, ಉಡುಗೋರೆ, ಮದ್ಯ ಹಂಚಿಕೆ, ಅನುಮತಿ ಪಡೆಯದೇ ಬ್ಯಾನರ್ ಅಥವಾ ಪೋಸ್ಟರ್, ಬೆದರಿಕೆ ಹಾಕುವುದು, ಬಂದೂಕು ಪ್ರದರ್ಶನ, ಧಾರ್ಮಿಕ ಅಥವಾ ಕೋಮು ಕುರಿತು ಪ್ರಚೋದಾರಿತ ಭಾಷಣ, ಮತಗಟ್ಟೆಯ 200 ಮೀಟರ್ ಪ್ರದೇಶದಲ್ಲಿ ನಿಷೇಧದ ಅವಧಿಯಲ್ಲೂ ಪ್ರಚಾರ, ಮತದಾನದ ದಿನದಂದು ಮತದಾರರನ್ನು ಸಾಗಿಸುವುದು.. ಹೀಗೆ ಯಾವುದೇ ರೀತಿ ಅಕ್ರಮ ಚಟುವಟಿಕೆಗಳು ಕಂಡು ಬಂದಲ್ಲಿ ಈ ಆಪ್ನಲ್ಲಿ ದೂರು ಕೊಡಬಹುದು. ಒಟ್ಟು 16 ರೀತಿಯ ದೂರುಗಳನ್ನು ನೀಡಬಹುದು.

*100 ನಿಮಿಷಗಳಲ್ಲಿ ಸಿಗಲಿದೆ ಉತ್ತರ:*-ಆಪ್ನಲ್ಲಿ ದಾಖಲಿಸುವ ದೂರುಗಳ ಬಗ್ಗೆ ಜಿಲ್ಲಾ ಮಟ್ಟದ ಸಿ-ವಿಜಿಲ್ ನೋಡೆಲ್ ಅಧಿಕಾರಿಗಳು ಕ್ರಮ ಕೈಗೊಳ್ಳಲಿದ್ದಾರೆ. ಸಾರ್ವಜನಕರ ದೂರುಗಳಿಗೆ 100 ನಿಮಿಷಗಳ ಒಳಗೆ ಅಧಿಕಾರಿಗಳ ಉತ್ತರ ಸಿಗಲಿದೆ. ಇದರಿಂದ ಅಭ್ಯರ್ಥಿಗಳು ಮತ್ತು ಕಾರ್ಯಕರ್ತರು ಆಮಿಷಗಳು ಸಾಕ್ಷಿ ಸಮೇತ ದಾಖಲಾಗಲಿವೆ. ದೂರಿನೊಂದಿಗೆ ಸೆರೆಹಿಡಿಯಲಾದ ಜಿಪಿಎಸ್ ಮಾಹಿತಿಯು ಅದನ್ನು ಸಂಬಂಧಪಟ್ಟ ಜಿಲ್ಲಾ ನಿಯಂತ್ರಣ ಕೊಠಡಿಗೆ ಸ್ವಯಂಚಾಲಿತವಾಗಿ ಫ್ಲಾಗ್ ಮಾಡುತ್ತದೆ. ಫ್ಲೈಯಿಂಗ್ ಸ್ಕ್ವಾಡ್ ತಂಡಗಳನ್ನು ಕೆಲವೇ ನಿಮಿಷಗಳಲ್ಲಿ ಸ್ಥಳಕ್ಕೆ ರವಾನಿಸಲು ಅನುವು ಮಾಡಿಕೊಡುತ್ತದೆ.

ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಈಗಾಗಲೇ ಕಂಟ್ರೋಲ್ ರೂಂ ಮತ್ತು ಸಿ-ವಿಜಿಲ್ ತಂಡ ಕಾರ್ಯಗತವಾಗಿದೆ. ಮಾದರಿ ನೀತಿ ಸಂಹಿತೆ ಜಾರಿಯಾದಾಗಿನಿಂದ ಇಲ್ಲಿಯ (ಮಾ.26)ವರೆಗೆ ಒಟ್ಟು 37 ದೂರುಗಳು ಸಿ-ವಿಜಿಲ್ ಮುಖಾಂತರ ದಾಖಲಾಗಿದ್ದು, 19 ಪ್ರಕರಣಗಳು ವಿಲೇ ಮಾಡಲಾಗಿದೆ.'ದೂರು ನೀಡುವಾಗ ದೂರುದಾರರ ಹೆಸರು, ವಿಳಾಸವನ್ನು ಗೌಪ್ಯವಾಗಿ ಇಡಲಾಗುತ್ತದೆ. ಚುನಾವಣೆ ಮುಗಿಯುವವರೆಗೂ ಮೂರು ಪಾಳಿಗಳಲ್ಲಿ 24 ಗಂಟೆಗೂ ಚುನಾವಣಾ ಸಿಬ್ಬಂದಿ ಕಾರ್ಯ ನಿರ್ವಹಿಸುವರು' ಎಂದು ಜಿಲ್ಲಾ ಸಿ-ವಿಜಿಲ್ ನೋಡೆಲ್ ಅಧಿಕಾರಿಯಾದ ಸಕೀನಾ ಅವರು ತಿಳಿಸಿದ್ದಾರೆ.

'ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಯುತವಾಗಿ ನಡೆಸಲು ಯಾವುದೇ ಚುನಾವಣೆ ಅಕ್ರಮ, ಆಮಿಷ ತಡೆಲು ಸಿವಿಜಿಲ್ ಬಳಸುವ ಮೂಲಕ ಎಲ್ಲರೂ ಒಟ್ಟಾಗಿ ಪ್ರಜಾಪ್ರಭುತ್ವದ ರಕ್ಷಕರಾಗೋಣ' ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಶಿಕ್ಷಕರ ನೈತಿಕ ಪ್ರಜ್ಞೆಯಿಂದ ಉತ್ತಮ ಸಮಾಜದ ನಿರ್ಮಾಣ ಸಾಧ್ಯ



ಬಳ್ಳಾರಿ.ಮಾ-: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಕೊಟ್ಟೂರು ಸ್ವಾಮಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಲಿಂ. ಅಲ್ಲಂ ಕರಿಬಸಪ್ಪ ಮತ್ತು ಶ್ರೀಮತಿ ಅಲ್ಲಂ ಸುಮಂಗಳಮ್ಮ ದತ್ತಿ, ಲಿಂ. ವಡ್ಡಿನಶೆಟ್ರ ಸಿದ್ಧಾರಾಮಯ್ಯ ಮತ್ತು ಮಹಾಂತಮ್ಮ ದತ್ತಿ, ಲಿಂ. ಸಂಗನಕಲ್ಲು ಶಾಂತಮ್ಮ ದತ್ತಿ, ಲಿಂ. ಕುಪ್ಪಗಲ್ಲು ನಾಗಪ್ಪನ ವೀರ ದತ್ತಿ, ಲಿಂ. ಜಾನೇಕುಂಟೆ ಸಿದ್ಧ ಬಸಪ್ಪ ದತ್ತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ, ಸತ್ಯಂ ಶಿಕ್ಷಕರ ಶಿಕ್ಷಣ ಮಹಾ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಆಲಂಬಾಳಾ ಅವರು ಶಿಕ್ಷಕರಲ್ಲಿ ನೈತಿಕ ಪ್ರಜ್ಞೆಯನ್ನು ಬೆಳೆಸುವ ಮೂಲಕ ಉತ್ತಮ ಸಮಾಜದ ನಿರ್ಮಾಣಕ್ಕೆ ನಾವೆಲ್ಲರೂ ಪಣ ತೊಡಬೇಕೆಂದು ಅಭಿಪ್ರಾಯಪಟ್ಟರು.

ವೀ.ವಿ. ಸಂಘದ ಮಾಜಿ ಅಧ್ಯಕ್ಷ ಅಲ್ಲಂ ಗುರು ಬಸವರಾಜ್ ದತ್ತಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕೊಟ್ಟೂರು ಸ್ವಾಮಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷತೆಯಾದ ಶ್ರೀಮತಿ ಕಾತ್ಯಾಯಿನ ಮರಿದೇವಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ದತ್ತಿ ದಾನಿಗಳಾದ ಡಾ. ವಿ.ಎಸ್. ಪ್ರಭಯ್ಯ , ಎಂ.ಎಸ್.ಎಂ. ಕಾಲೇಜಿನ ಅಧ್ಯಕ್ಷರಾದ ಶ್ರೀಮತಿ ಕುಪ್ಪಗಲ್ಲು ಗಿರಿಜಾ, ಮುಖ್ಯ ಅತಿಥಿಗಳಾಗಿ ಖ್ಯಾತ ಗಾಯಕ ಯಲ್ಲನಗೌಡ ಶಂಕರಬಂಡೆ, ಅಂಗಡಿ ರಾಜಶೇಖರ, ಪ್ರಾಂಶುಪಾಲರಾದ ಡಾ. ಸತೀಶ್ ಎ ಹಿರೇಮಠ ವೇದಿಕೆಯಲ್ಲಿ ಉಪಸ್ಥಿತರಿದ್ದರು.ಸನ್ಮಾರ್ಗ ಬಳಗದ ಕಪ್ಪಗಲ್ಲು ಚಂದ್ರಶೇಖರ್ ಆಚಾರ್, ಶ್ರೀಮತಿ ಎ.ಎನ್. ಸಿದ್ದೇಶ್ವರಿ, ಅಚ್ಚಪ್ಪ ನಾಗರಾಜ್, ತಾ. ಕಸಾಪ ಅಧ್ಯಕ್ಷ ಕೆ.ವಿ. ನಾಗರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.ಯಲ್ಲನಗೌಡ ಶಂಕರಬಂಡೆ ಗೀತಗಾಯನ ಮಾಡಿದರು.ಡಾ. ಬಸವರಾಜ್ ಗದಗಿನ ಸ್ವಾಗತಿಸಿದರು. ಕು. ಗೌರಮ್ಮ ಕಾರ್ಯಕ್ರಮವನ್ನು ನಿರೂಪಿಸಿದರು. ಕು. ಜ್ಯೋತಿ ಪ್ರಾರ್ಥಿಸಿದರು. ಕು. ಹೇಮಾ ವಂದನಾರ್ಪಣೆ ಸಲ್ಲಿಸಿದರು.

# ಆರ್‌ವೈಎಂಇಸಿಯ ಆಡಳಿತ ಮಂಡಳಿಯ ಅಧ್ಯಕ್ಷ ಅಲ್ಲಂ ಚನ್ನಪ್ಪ, ಹಾಗೂ ಸದಸ್ಯರುಗಳಿಗೆ ಗೌರವ ಸಮರ್ಪಣೆ ಕಾರ್ಯಕ್ರಮ



ಬಳ್ಳಾರಿ ಮಾ-:. ಬಳ್ಳಾರಿಯ ನಮ್ಮ ಸಂಸ್ಥೆಯ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜಿನ ಅಧ್ಯಕ್ಷರಾದ ಅಲ್ಲಂ ಚನ್ನಪ್ಪ, ಹಾಗೂ ಆಡಳಿತ ಮಂಡಳಿಯ ಸದಸ್ಯರಾದ ಜಿ.ಎಂ ಮಲ್ಲಿಕಾರ್ಜುನ ರೆಡ್ಡಿ, ಬಸವರಾಜ ರೂಪನಗುಡಿ, ಜಾನೆಕುಂಟೆ ಪಂಪನ ಗೌಡ, ಕೊರ್ಲಗುಂದಿ ಬಸವನ ಗೌಡ, ಹಲಕುಂದಿ ಸತೀಶ್ ಕುಮಾರ್, ಇವರಿಗೆ ಆತ್ಮೀಯ ಬೀಳ್ಕೊಳುಗೆ ಸಮಾರಂಭ ಗೌರವ ಸಮರ್ಪಣೆ ಕಾರ್ಯಕ್ರಮವು ದಿನಾಂಕ: 26.03.2024 11ಗಂಟೆಗೆ ಹಮ್ಮಿಕೊಳ್ಳಲಾಗಿತ್ತು. ಅಧ್ಯಕ್ಷರಾದ ಅಲ್ಲಂ ಚನ್ನಪ್ಪ ನವರು ಸಭೆಯನ್ನುದ್ದೇಶಿಸಿ, ಅವರು "ಈ ನಮ್ಮ ವೀವಿ ಸಂಘದ ಸ್ಥಾಪನೆಯಾದ ವಿವರಗಳನ್ನು ಹಾಗೂ ಆಗಿನ ಹಿರಿಯ ಬಳ್ಳಾರಿ ಮತ್ತು ಬಳ್ಳಾರಿ ಜಿಲ್ಲೆಯ ಹಿರಿಯ ಗಣ್ಯ ವ್ಯಕ್ತಿಗಳು ಈ ಸಂಸ್ಥೆಯನ್ನು ಕಟ್ಟಿ ಬೆಳೆಸಲು ಶ್ರಮಿಸಿದ ರೀತಿಗಳನ್ನು ಶ್ಲಾಘಿಸಿದರು. ಈ ಸಂಘದ ಏಳಿಗೆಗಾಗಿ ಅನೇಕ ವ್ಯಕ್ತಿಗಳು ತಮ್ಮ ತನು ಮನ ಧನ ಗಳಿಂದ ಸೇವೆ ಸಲ್ಲಿಸಿರುತ್ತಾರೆ. ಈ ನಮ್ಮ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ವಿದ್ಯಾಲಯವು ಈ ಸಂಘದ ಕಳಸ ವಿದ್ದಂತೆ. ಈ ಕಾಲೇಜಿನ ಸ್ಥಾಪನೆಗೆ ಶ್ರಮಪಟ್ಟ ಎಲ್ಲಾ ಗಣ್ಯರಿಗೆ ಈ ಸಂದರ್ಭದಲ್ಲಿ ಸ್ಮರಿಸುವುದು ಅಗತ್ಯವಾಗಿದೆ ಎಂದರು. ಇನ್ನು ಮುಂದೆ ಈ ಕಾಲೇಜು ಇನ್ನು ಹೆಚ್ಚಿನ ಮಟ್ಟದಲ್ಲಿ ಬೆಳೆಯಬೇಕೆಂದು ಆಶಿಸಿದರು. ಈ ಹಿಂದೆ ನಮ್ಮ ಸಂಘದ ಏಳಿಗೆಗಾಗಿ ಅನೇಕ ಗಣ್ಯವ್ಯಕ್ತಿಗಳು ಶ್ರಮಿಸಿದ್ದಾರೆ. ಈಗ ನಾವು ನಮ್ಮ ಅಳಿಲು ಸೇವೆಯನ್ನು ಮಾಡುವಲ್ಲಿ ಸಫಲವಾಗಿರುತ್ತೇವೆ ಎಂದರು. ಇನ್ನು ಮುಂದೆ ಸಹಾ ಈ ಸಂಘದ ಏಳಿಗೆಗಾಗಿ ಸದಾಸಿದ್ಧರಾಗಿರುವುದಾಗಿ" ಎಂದು ಕೋರಿದರು.

ಆರ್.ವೈ.ಎಮ್,ಇ,ಸಿ ಆಡಳಿತ ಮಂಡಳಿಯ ಸದಸ್ಯರಾದ ಜಿ.ಎಂ ಮಲ್ಲಿಕಾರ್ಜುನ ರೆಡ್ಡಿ, ಬಸವರಾಜ ರೂಪನಗುಡಿ, ಜಾನೆಕುಂಟೆ ಪಂಪನ ಗೌಡ, ಇವರು ಮಾತನಾಡಿ, "ತಾವು ಓದುತ್ತಿದ್ದಾಗ ಪದವಿ ಅಲ್ಲದೇ ಇನ್ನು ಕಡಿಮೆ ಪ್ರಮಾಣದ ವಿದ್ಯೆಯನ್ನುಪೂರ್ಣಗೊಳಿಸಿದವರಿಗೆ ಕೆಲಸಗಳು ಅತಿ ಬೇಗನೆ ದೊರೆಯುತ್ತಿದ್ದವು. ಆದರೆ ಈಗ ಪ್ರತಿ ಕ್ಷೇತ್ರದಲ್ಲೂ ಹುದ್ದೆಗಳಿಗಾಗಿ ಬಹಳ ಪ್ರಯಾಸ ಪಡಬೇಕಾಗಿರುತ್ತದೆ. ಅದಕ್ಕೆ ನಮ್ಮ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಿಕೊಂಡು ಒಳ್ಳೆಯ ವಿದ್ಯಾರ್ಥಿಗಳನ್ನಾಗಿ ಮಾಡುವುದು ನಮ್ಮ ಸಂಘದ ಮುಖ್ಯಗುರಿ, ನಮ್ಮ ರಾಜ್ಯದಲ್ಲಿ ಅನೇಕ ಜಿಲ್ಲೆಗಳಲ್ಲಿ ಈ ತರಹದ ಸಂಘಸಂಸ್ಥೆಗಳು ವಿದ್ಯಾಭ್ಯಾಸಕ್ಕೆ ಒತ್ತುಕೊಟ್ಟಿರುತ್ತವೆ ಆದರೂ ನಮ್ಮ ಉತ್ತರ ಕರ್ನಾಟಕದ ಭಾಗದಲ್ಲಿ ವೀ.ವಿ. ಸಂಘವು ಅತಿ ಉನ್ನತಸ್ಥಾನಕ್ಕೆ ಏರಿ ನಮ್ಮ ಬಳ್ಳಾರಿಯ ಹೆಸರನ್ನು ಸುವರ್ಣಾಕ್ಷರದಲ್ಲಿ ಬರೆಯುವಂತೆ ಮಾಡಿರುತ್ತದೆ. ಈ ನಮ್ಮ ಸಂಸ್ಥೆಯದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು ಸಂಸ್ಥೆಯಲ್ಲಿ ಪದವಿಯನ್ನು ಪೂರ್ಣಗೊಳಿಸಿ, ನಮ್ಮ ಸಮಾಜದಲ್ಲಿ ಉನ್ನತ ಒಳ್ಳೆಯ ಹೆಸರನ್ನು ತರುತ್ತಿದ್ದಾರೆ. ಅದಕ್ಕೆ ನಾವುಚಿರಋಣಿಯಾಗಿರುತ್ತೇವ, ಇನ್ನು ಮುಂದೆ ಸಹಾ ಈ ಸಂಘ, ಸಂಸ್ಥೆಯ ಏಳಿಗೆಗಾಗಿ ಸದಾಸಿದ್ಧರಾಗಿರುವುದಾಗಿ" ಕೋರಿದರು.

ಇದೇ ಸಂದರ್ಭದಲ್ಲಿ ಅಧ್ಯಕ್ಷರಾದ ಅಲ್ಲಂ ಚನ್ನಪ್ಪ, ಹಾಗೂ ಆಡಳಿತ ಮಂಡಳಿಯ ಸದಸ್ಯರಾದ ಜಿ.ಎಂ ಮಲ್ಲಿಕಾರ್ಜುನ ರೆಡ್ಡಿ, ಬಸವರಾಜರೂಪನಗುಡಿ,ಜಾನೆಕುಂಟೆ ಪಂಪನ ಗೌಡ,ಕೊರ್ಲಗುಂದಿ ಬಸವನ ಗೌಡ,ಹಲಕುಂದಿ ಸತೀಶ್ ಕುಮಾರ್, ಅವರಿಗೆ ಸನ್ಮಾನಸಲಾಯಿತು. ಪ್ರಾಂಶುಪಾಲರು ಡಾ.ಟಿ.ಹನುಮಂತ ರೆಡ್ಡಿ, ಉಪ ಪ್ರಾಂಶುಪಾಲರು ಡಾ.ಸವಿತಾ ಸೋನೋಳಿ, ವಿಭಾಗಗಳ ಮುಖ್ಯಸ್ಥರು, ಬೋಧಕ ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.